ಫೋನ್ ನಂ. 080-22100409
ಫ್ಯಾಕ್ಸ್ ನಂ. 080-22278803
ವೆಬ್ ಸೈಟ್: https://kptcl.karnataka.gov.in
ಇ-ಮೇಲ್:director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): U40109KA1999SGC025521
ಕಂಪನಿಯ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560009.

ನಂ: ಬಿ8/21393/21-22
ಲಗತ್ತು:

ನಿಗಮ ಕಾರ್ಯಾಲಯ,
ಕಾವೇರಿ ಭವನ,
ಬೆಂಗಳೂರು-560009,
ದಿನಾಂಕ:
21 FEB 2022

ಗೆ,
ಎಲ್ಲಾ ಮುಖ್ಯ ಇಂಜಿನಿಯರ್ (ವಿ),
ಪ್ರಸರಣ ವಲಯ, ಕವಿಪ್ರನಿನಿ.

ಮಾನ್ಯರೆ,

**ವಿಷಯ:** 27ನೇ ಫೆಬ್ರವರಿ 2022 ರಂದು ನಡೆಯುವ ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) ಕಾರ್ಯಕ್ರಮದ ನಿಮಿತ್ತ ನಿರಂತರ ಅಡಚಣೆರಹಿತ ವಿದ್ಯುಚ್ಛಕ್ತಿ ಪೂರೈಸುವ ಕುರಿತಂತೆ.

**ಉಲ್ಲೇಖ:** ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರುರವರ ಪತ್ರ ಸಂಖ್ಯೆ: ಎನ್ಎಚ್ಎಂ/ಡಿಡಿ/ಐಎಂಎಂ/71/2021-22 ದಿನಾಂಕ:08.02.2022.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರದ ನಿರ್ದೇಶನದ ಮೇರೆಗೆ ಪ್ರತಿ ವರ್ಷದಂತೆ ಈ ವರ್ಷವೂ ಸಹ ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) ಕಾರ್ಯಕ್ರಮವನ್ನು 27ನೇ ಫೆಬ್ರವರಿ 2022 ರಂದು ರಾಜ್ಯದಲ್ಲಿ ಯಶಸ್ವಿಯಾಗಿ ನಡೆಸಲು ಸಹಕಾರ ನೀಡುವಂತೆ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರರವರು ಉಲ್ಲೇಖ ಪತ್ರದಲ್ಲಿ ತಿಳಿಸಿರುತ್ತಾರೆ.

AEES
21/2/22

ಮುಂಬರುವ 27ನೇ ಫೆಬ್ರವರಿ 2022 ರಂದು ಒಂದು ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು boPV ನೀಡುವುದರ ಮೂಲಕ ಕಾರ್ಯಕ್ರಮದ ಮೊದಲನೇ ದಿನ ಪೋಲಿಯೋ ಬೂತ್‌ಗಳಲ್ಲಿ ಹಾಗೂ ನಂತರದ 2-3 ದಿನಗಳಲ್ಲಿ ಮನೆ-ಮನೆ ಭೇಟಿಯ ಮೂಲಕ 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಹನಿ ನೀಡಲು ವ್ಯವಸ್ಥೆ ಮಾಡಬೇಕಾಗಿರುವುದರಿಂದ, ಲಸಿಕೆಗಳನ್ನು ಸುರಕ್ಷಿತವಾಗಿಡಲು ಹಾಗೂ ಶೀತಲ ಪ್ಯಾಕ್‌ಗಳನ್ನು ತಯಾರಿಸಲು ನಿರಂತರ ವಿದ್ಯುಚ್ಛಕ್ತಿಯ ಅವಶ್ಯಕತೆ ಇದ್ದು, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರದ ಪ್ರದೇಶಗಳಲ್ಲಿ, ಪಲ್ಸ್ ಪೋಲಿಯೋ ದಿನಾಂಕದ ಹಿಂದಿನ ಒಂದು ವಾರದಿಂದ ಮುಂದಿನ ಮೂರು ದಿನಗಳವರೆಗೆ ನಿರಂತರ ವಿದ್ಯುತ್ ಪೂರೈಕೆಗೆ ಕ್ರಮ ವಹಿಸಿ ಸದರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಆದುದರಿಂದ, ಸದರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ, ನಿಮ್ಮ ವ್ಯಾಪ್ತಿಯಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರದ ಪ್ರದೇಶಗಳಲ್ಲಿ ಲಸಿಕೆಯನ್ನು ಸುರಕ್ಷಿತವಾಗಿಡಲು

ಹಾಗೂ ಶೀತಲ ಪ್ಯಾಕ್‌ಗಳನ್ನು ತಯಾರಿಸಲು ನಿರಂತರ ವಿದ್ಯುಚ್ಛಕ್ತಿಯ ಅವಶ್ಯಕತೆಯಿರುವುದರಿಂದ, ದಿನಾಂಕ: 21.02.2022 ರಿಂದ 02.03.2022 ರವರೆಗೆ, ಈ ಪ್ರದೇಶಗಳಲ್ಲಿ ಯಾವುದೇ ಪೂರ್ವನಿಯೋಜಿತ ನಿರ್ವಹಣಾ ಕಾಮಗಾರಿಗಳನ್ನು ಕೈಗೊಳ್ಳದಿರಲು ಹಾಗೂ ಅಡಚಣೆರಹಿತ ನಿರಂತರ ವಿದ್ಯುತ್ ಪೂರೈಕೆಗೆ ಅಗತ್ಯ ಸಿಬ್ಬಂಧಿಗಳನ್ನು ನಿಯೋಜಿಸಿ ನಿಗಮದ ನಿಯಮಾನುಸಾರ ಎಲ್ಲಾ ಅಗತ್ಯ ಕ್ರಮಗಳನ್ನು ತಮ್ಮ ವೈಯಕ್ತಿಕ ಗಮನ ಹರಿಸಿ ಕೈಗೊಳ್ಳಲು ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು (ಆಡಳಿತ ಮತ್ತು ಮಾ.ಸಂ)
ಕವಿಪ್ರನಿನಿ, ಬೆಂಗಳೂರು.

**ಪ್ರತಿಗಳನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ:**

1. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ), ಪ್ರಸರಣ (ಕಾಮಗಾರಿ ಮತ್ತು ನಿರ್ವಹಣೆ) ವೃತ್ತ.
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಟಿ.ಎಲ್ & ಎಸ್.ಎಸ್ ವಿಭಾಗ.
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ನೋಡಲ್ ಕೇಂದ್ರ.
4. ಎಲ್ಲಾ ಸಹಾಯಕ ಇಂಜಿನಿಯರ್ (ವಿ), 220 ಕೆ.ವಿ / 110 ಕೆ.ವಿ / 66 ಕೆ.ವಿ ವಿ.ವಿ.ಕೇಂದ್ರ.

**ಪ್ರತಿ,**

1. ಅಧೀಕ್ಷಕ ಇಂಜಿನಿಯರ್ (ವಿ), (ಐ.ಟಿ ಮತ್ತು ಎಂ.ಐ.ಎಸ್), ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸಲು.
2. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ) ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
3. ನಿರ್ದೇಶಕರು (ತಾಂತ್ರಿಕ), ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳು ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಸಂಬಂಧಿಸಿದ ನಿರ್ದೇಶಕರುಗಳ ಗಮನಕ್ಕೆ ತರಲು.